**All India Radio: Bangalore**
**National Bulletin In Kannada**
**19.04.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.04.2026 1.10 p.m.**

**<><><><>**

ಮುಖ್ಯಾಂಶಗಳು

1. ದೇಶದ ಅಭಿವೃದ್ಧಿಗಾಗಿ ರಾಜಕೀಯ ಕ್ಷೇತ್ರಕ್ಕೆ ಹೆಚ್ಚಿನ ಮಹಿಳೆಯರ ಪ್ರವೇಶ ಅಗತ್ಯ - ಪ್ರಧಾನಿ ನರೇಂದ್ರ ಮೋದಿ ಅಭಿಮತ
2. ವಾಯು ಮಾಲಿನ್ಯ ಮತ್ತು ಹವಾಮಾನ ಮೇಲ್ವಿಚಾರಣೆಗಾಗಿ ವಿನ್ಯಾಸಗೊಳಿಸಲಾದ ಜಿ-೨೦ ಉಪಗ್ರಹ ೨೦೨೭ ರಲ್ಲಿ ಉಡಾವಣೆ ನಿರೀಕ್ಷೆ -ಇಸ್ರೋ
3. "ಘನವಾದ ಅಭ್ಯಾಸಗಳು; ಸುದೃಢ ಯಕೃತ್" ಎಂಬ ಧ್ಯೇಯದೊಂದಿಗೆ, ಇಂದು ದೇಶದೆಲ್ಲೆಡೆ 'ವಿಶ್ವ ಯಕೃತ್ ದಿನ' ಆಚರಣೆ
4. ಅಕ್ಷಯ ತೃತೀಯದ ಶುಭ ಸಂದರ್ಭದಲ್ಲಿ ಇಂದು ಭಕ್ತರಿಗಾಗಿ ತೆರೆದ ಗಂಗೋತ್ರಿ, ಯಮುನೋತ್ರಿ ದೇಗುಲದ ದ್ವಾರಗಳು
5. ಭಾರತ - ದಕ್ಷಿಣ ಆಫ್ರಿಕಾ ನಡುವಿನ ಅಂತಾರಾಷ್ಟ್ರೀಯ ಮಹಿಳಾ ಟಿ-೨೦ ಕ್ರಿಕೆಟ್ ಸರಣಿ; ಡರ್ಬನ್‌ನ ಕಿಂಗ್ಸ್‌ಮೀಡ್‌ನಲ್ಲಿಂದು ಎರಡನೇ ಪಂದ್ಯ

<><><><>

೨೦೨೯ ರಲ್ಲಿ ಮಹಿಳಾ ಮೀಸಲಾತಿ ನೀಡುವ ಮಸೂದೆ ಅಂಗೀಕಾರವಾಗದಂತೆ ತಡೆಯಲು ತೃಣಮೂಲ ಕಾಂಗ್ರೆಸ್, ಕಾಂಗ್ರೆಸ್ ಜೊತೆ ಪಿತೂರಿ ನಡೆಸಿದೆ. ಇದಕ್ಕೆ ಜನತೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಪಶ್ಚಿಮ ಬಂಗಾಳದಲ್ಲಿನ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಂಕುರಾ ಜಿಲ್ಲೆಯ ಬಿಷ್ಣುಪುರದಲ್ಲಿ ಇಂದು ನಡೆದ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ದೇಶದ ಅಭಿವೃದ್ಧಿಯನ್ನು ಖಾತರಿ ಹೆಚ್ಚಿನ ಮಹಿಳೆಯರು ರಾಜಕೀಯಕ್ಕೆ ಸೇರಬೇಕಿದೆ. ಬಿಜೆಪಿ ಮಹಿಳಾ ಸಬಲೀಕರಣಕ್ಕೆ ಸಮಾನಾರ್ಥಕವಾಗಿದೆ ಮತ್ತು ಮಹಿಳೆಯರ ಸುರಕ್ಷತೆ ಮತ್ತು ಭದ್ರತೆಗೆ ಬದ್ಧವಾಗಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು. ರಾಷ್ಟ್ರಪತಿ ಚುನಾವಣೆಯ ಸಮಯದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು

ವಿರುದ್ಧ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದ ತೃಣಮೂಲ ಕಾಂಗ್ರೆಸ್ ಮತ್ತು ಕಾಂಗ್ರೆಸ್ ಎರಡೂ ಪಕ್ಷಗಳು ಬುಡಕಟ್ಟು ವಿರೋಧಿಗಳು ಎಂದು ಪ್ರಧಾನಿ ಆರೋಪಿಸಿದ್ದಾರೆ. ಒಳನುಸುಳುಕೋರರಿಗೆ ಅನುಕೂಲವಾಗುವಂತೆ ಕಾನೂನುಗಳನ್ನು ಉಲ್ಲಂಘಿಸಿ ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡುತ್ತಿದೆ. ತೃಣಮೂಲ ಕಾಂಗ್ರೆಸ್ ಮಹಿಳಾ ಸಬಲೀಕರಣವನ್ನು ವಿರೋಧಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ದೂರಿದ್ದಾರೆ.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಎರಡು ದಿನಗಳ ಶ್ರೀಲಂಕಾ ಭೇಟಿಗಾಗಿ ಕೊಲಂಬೊಗೆ ತಲುಪಿದ್ದಾರೆ. ಶ್ರೀಲಂಕಾಗೆ ಇದು ಅವರ ಮೊದಲ ದ್ವಿಪಕ್ಷೀಯ ಭೇಟಿಯಾಗಿದೆ. ಈ ಸಂದರ್ಭದಲ್ಲಿ ಅವರು ಶ್ರೀಲಂಕಾ ಅಧ್ಯಕ್ಷ ಅನುರಾಕುಮಾರ ದಿಸ್ಸಾನಾಯಕ ಅವರನ್ನು ಭೇಟಿ ಮಾಡಿದರು. ಈ ಸಂದರ್ಭದಲ್ಲಿ ವಿಶ್ವಾಸ, ಸಾಂಸ್ಕೃತಿಕ ಮೌಲ್ಯಗಳಲ್ಲಿ ಬೇರೂರಿರುವ ಬಹುಮುಖಿ ಭಾರತ-ಶ್ರೀಲಂಕಾ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುವ ಕುರಿತು ಉಭಯ ನಾಯಕರು ಚರ್ಚೆ ನಡೆಸಿದರು. ಉಪರಾಷ್ಟ್ರಪತಿಯವರು ಶ್ರೀಲಂಕಾ ಪ್ರಧಾನಿ ಡಾ.ಹರಿಣಿ ಅಮರಸೂರ್ಯ ಹಾಗೂ ಇತರ ಗಣ್ಯರನ್ನು ಸಹ ಭೇಟಿ ಮಾಡಲಿದ್ದಾರೆ. ಪ್ರವಾಸದ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಶ್ರೀಲಂಕಾದ ಉತ್ತರ ಮತ್ತು ಪೂರ್ವ ಪ್ರದೇಶಗಳ ಭಾರತೀಯ ಮೂಲದ ತಮಿಳು ಸಮುದಾಯಗಳ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. ಕೊಲಂಬೊದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಅವರು, ಭಾರತೀಯ ಸಮುದಾಯುವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಭಾರತೀಯ ವಸತಿ ಯೋಜನೆಯ ಮೂರನೇ ಹಂತದ ಭಾಗವಾಗಿ ಭಾರತ ಸರ್ಕಾರದ ನೆರವಿನೊಂದಿಗೆ ನಿರ್ಮಿಸಲಾಗಿರುವ ಮನೆಗಳನ್ನು ತಮಿಳು ಸಮುದಾಯದ ಫಲಾನುಭವಿಗಳಿಗೆ ಉಪರಾಷ್ಟ್ರಪತಿಗಳು ಹಸ್ತಾಂತರಿಸಲಿದ್ದಾರೆ. ಈ ಭೇಟಿಯು, ಭಾರತ ಮತ್ತು ಲಂಕಾ ನಡುವಿನ ಶತಮಾನಗಳ ಹಳೆಯ ನಾಗರಿಕತೆ ಮತ್ತು ಜನರಿಂದ ಜನರ ನಡುವಿನ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ.

<><><><>

ವಾಯು ಮಾಲಿನ್ಯ ಮತ್ತು ಹವಾಮಾನ ಮೇಲ್ವಿಚಾರಣೆಗಾಗಿ ವಿನ್ಯಾಸಗೊಳಿಸಲಾದ ಜಿ-೨೦ ಉಪಗ್ರಹವನ್ನು ೨೦೨೭ ರಲ್ಲಿ ಉಡಾವಣೆ ಮಾಡುವ ನಿರೀಕ್ಷೆಯಿದೆ ಎಂದು ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ತಿಳಿಸಿದ್ದಾರೆ. ಹೈದರಾಬಾದ್‌ನ ಎಂಜಿನಿಯರಿಂಗ್ ಸ್ಟಾಫ್ ಕಾಲೇಜ್ ಆಫ್ ಇಂಡಿಯಾದಲ್ಲಿ ಡಿಆರ್‌ಡಿಒ, ಇಸ್ರೋ ಮತ್ತು ಏರೋನಾಟಿಕಲ್ ಸೊಸೈಟಿ ಆಫ್ ಇಂಡಿಯಾದ

ವಿಜ್ಞಾನಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಯಾವುದೇ ಘರ್ಷಣೆಯಿಲ್ಲದೆ ಒಂದೇ ರಾಕೆಟ್ ಬಳಸಿ ೧೦೦ ಕ್ಕೂ ಹೆಚ್ಚು ಉಪಗ್ರಹಗಳನ್ನು ಉಡಾಯಿಸುವಲ್ಲಿ ಯಶಸ್ವಿಯಾದ ಮೊದಲ ದೇಶ ಭಾರತ ಎಂದು ಅವರು ಹೇಳಿದ್ದಾರೆ. ಜಿ-೨೦ ದೇಶಗಳಿಗೆ ಜಿ-೨೦ ಉಪಗ್ರಹದ ಉಡಾವಣೆಯಲ್ಲಿ ಭಾರತ ಪ್ರಮುಖ ಪಾತ್ರ ವಹಿಸುತ್ತಿದೆ. ೨೦೪೦ ರ ವೇಳೆಗೆ ಚಂದ್ರನಿಗೆ ಮನುಷ್ಯನನ್ನು ಕಳುಹಿಸುವ ಗುರಿಯನ್ನು ಇಸ್ರೋ ಹೊಂದಿದೆ ಎಂದು ಅವರು ತಿಳಿಸಿದ್ದಾರೆ. ೨೦೪೦ ರ ವೇಳೆಗೆ ಇಸ್ರೋ ಇದನ್ನು ಸಾಧ್ಯವಾಗಿಸಿದರೆ, ಉಡಾವಣಾ ತಂತ್ರಜ್ಞಾನ, ಉಪಗ್ರಹ ತಂತ್ರಜ್ಞಾನ, ಅನ್ವಯಿಕ ಪ್ರದೇಶ ಮತ್ತು ಮಾನವ ಬಾಹ್ಯಾಕಾಶ ಹಾರಾಟ ಕಾರ್ಯಕ್ರಮದ ವಿಷಯದಲ್ಲಿ ಭಾರತವು ಯಾವುದೇ ಇತರ ಬಾಹ್ಯಾಕಾಶ ಪ್ರಯಾಣ ರಾಷ್ಟ್ರಗಳಿಗೆ ಸಮನಾಗಿರುತ್ತದೆ ಎಂದು ಅವರು ಹೇಳಿದ್ದಾರೆ. ಆಳವಾದ ಸಾಗರ ಮಿಷನ್‌ಗಾಗಿನ ಯೋಜನೆಯಾದ ಸಮುದ್ರಯಾನಕ್ಕಾಗಿ ಇಸ್ರೋ ೨.೨ ಮೀಟರ್ ವ್ಯಾಸದ ೧೦೦ ಎಂಎಂ ದಪ್ಪವಿರುವ ಟೈಟಾನಿಯಂ ಹಡಗನ್ನು ತಯಾರಿಸುವ ಪ್ರಕ್ರಿಯೆಯಲ್ಲಿದೆ ಎಂದು ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ತಿಳಿಸಿದ್ದಾರೆ.

<><><><>

"ಘನವಾದ ಅಭ್ಯಾಸಗಳು; ಸುದೃಢ ಯಕೃತ್" ಎಂಬ ಧ್ಯೇಯದೊಂದಿಗೆ, ಇಂದು ದೇಶದೆಲ್ಲೆಡೆ 'ವಿಶ್ವ ಯಕೃತ್ ದಿನ' ಆಚರಿಸಲಾಗುತ್ತಿದೆ. ಯಕೃತ್ತಿಗೆ ಸಂಬಂಧಿಸಿದ ಕಾಯಿಲೆಗಳು, ಆರಂಭಿಕ ಪತ್ತೆಯ ಮಹತ್ವ, ಮತ್ತು ತಡೆಗಟ್ಟುವ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಲು ಏಪ್ರಿಲ್ ೧೯ ರಂದು ವಿಶ್ವ ಯಕೃತ್ ದಿನ ಆಚರಿಸಲಾಗುತ್ತದೆ. ಹೆಪಟೈಟಿಸ್ ಮತ್ತು ಸಿರೋಸಿಸ್‌ನಂತಹ, ಯಕೃತ್ತಿನ ಕಾಯಿಲೆಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಯಕೃತ್ ದೇಹದಲ್ಲಿ ಎರಡನೇ ಅತಿದೊಡ್ಡ ಅಂಗವಾಗಿದೆ. ಇದು ಮೌನ ಕೆಲಸಗಾರ. ಕೊನೆಯ ಹಂತಗಳವರೆಗೆ, ಯಾವುದೇ ಹಾನಿಯ ಲಕ್ಷಣಗಳನ್ನು ತೋರದ ಅಂಗವಾಗಿದೆ ಎಂದು ಯಕೃತ್ ಅಧ್ಯಯನದ ಯುರೋಪಿಯನ್ ಅಸೋಸಿಯೇಷನ್ ಹೇಳಿದೆ. ವಿಶ್ವ ಯಕೃತ್ ದಿನದ ಅಂಗವಾಗಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ನಾಗರಿಕರು ತಮ್ಮ ಆರೋಗ್ಯದ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು ಮತ್ತು ಆರೋಗ್ಯಕರ ಯಕೃತ್ತು ಮತ್ತು ಆರೋಗ್ಯಕರ ಭವಿಷ್ಯಕ್ಕಾಗಿ ದಿನಚರಿಯಲ್ಲಿ ಉತ್ತಮ ಅಭ್ಯಾಸಗಳನ್ನು ಆಯ್ಕೆಮಾಡುವಂತೆ ಕರೆ ನೀಡಿದ್ದಾರೆ. ಆರೋಗ್ಯಕರ ಜೀವನಕ್ಕೆ ಆರೋಗ್ಯಕರ ಯಕೃತ್ ಪ್ರಮುಖವಾಗಿದೆ ಎಂದು ಅವರು ಹೇಳಿದ್ದಾರೆ. ಪೌಷ್ಟಿಕ ಆಹಾರವನ್ನು ಸೇವಿಸುವುದು, ಹೆಚ್ಚು ನೀರು ಕುಡಿಯುವುದು ಮತ್ತು

ದೈಹಿಕವಾಗಿ ಸಕ್ರಿಯವಾಗಿರುವುದು ಇತ್ಯಾದಿ ಸರಳ ಅಭ್ಯಾಸಗಳು ಆರೋಗ್ಯದಲ್ಲಿ ದೊಡ್ಡ ವ್ಯತ್ಯಾಸವನ್ನುಂಟುಮಾಡುತ್ತವೆ ಎಂದು ಸಚಿವರು ಹೇಳಿದ್ದಾರೆ.

<><><>

ವಾಯು ಗುಣಮಟ್ಟ ನಿರ್ವಹಣಾ ಆಯೋಗದ ಜಾರಿ ಕಾರ್ಯಪಡೆ-ಸಿ.ಎ.ಕ್ಯೂ.ಎಂ, ದೆಹಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಯು ಮಾಲಿನ್ಯವನ್ನು ನಿಯಂತ್ರಿಸಲು ಇತ್ತೀಚೆಗೆ ತೆಗೆದುಕೊಂಡ ಕ್ರಮಗಳನ್ನು ಪರಿಶೀಲಿಸಲು ಸಭೆ ನಡೆಸಿದೆ. ಕಳೆದ ತಿಂಗಳ ೨೭ ರಿಂದ ಈ ತಿಂಗಳ ೧೦ ರವರೆಗಿನ ೧೫ ದಿನಗಳ ಅವಧಿಯಲ್ಲಿ, ಅಧಿಕಾರಿಗಳು ವಿವಿಧ ವಲಯಗಳಲ್ಲಿ ೧೬೨ ತಪಾಸಣೆಗಳನ್ನು ನಡೆಸಿ, ೬೪ ಉಲ್ಲಂಘನೆಗಳನ್ನು ಪತ್ತೆಹಚ್ಚಿದ್ದಾರೆ. ಇವುಗಳಲ್ಲಿ ಕಟ್ಟಡಗಳ ನಿರ್ಮಾಣ ಮತ್ತು ಉರುಳಿಸುವಿಕೆಯ ಸ್ಥಳಗಳಲ್ಲಿ ೨೫ ತಪಾಸಣೆಗಳು, ಕೈಗಾರಿಕಾ ಪ್ರದೇಶಗಳಲ್ಲಿ ೨೮ ಮತ್ತು ಡೀಸೆಲ್ ಜನರೇಟರ್ ಸೆಟ್‌ಗಳಿಗೆ ಸಂಬಂಧಿಸಿದ ೧೦೯ ತಪಾಸಣೆಗಳು ಸೇರಿವೆ.

<><><>

ಇಂದು ದೇಶಾದ್ಯಂತ ಅಕ್ಷಯ ತೃತೀಯ ಹಬ್ಬವನ್ನು ಆಚರಿಸಲಾಗುತ್ತಿದೆ. ಈ ಹಬ್ಬವು ಅದೃಷ್ಟ ಮತ್ತು ಯಶಸ್ಸನ್ನು ತರುತ್ತದೆ ಎಂದು ನಂಬಲಾಗುತ್ತದೆ. ಈ ದಿನದಂದು, ಜನರು ವಿಶೇಷವಾಗಿ ಐಶ್ವರ್ಯ ಮತ್ತು ಸಮೃದ್ಧಿಗಾಗಿ ದೇವರಿಗೆ ಪೂಜೆ ಮತ್ತು ಪ್ರಾರ್ಥನೆ ಸಲ್ಲಿಸುತ್ತಾರೆ. ನೂತನ ವ್ಯವಹಾರಗಳನ್ನು ಪ್ರಾರಂಭಿಸಲು ಶುಭ ದಿನ ಎಂಬ ನಂಬಿಕೆಯಿದೆ. ಅನೇಕ ಜನರು ಈ ದಿನದಂದು ಚಿನ್ನವನ್ನು ಸಹ ಖರೀದಿಸುತ್ತಾರೆ. ಇದೇ ದಿನ ವಿಷ್ಣುವಿನ ಆರನೇ ಅವತಾರವಾಗಿರುವ ಭಗವಾನ್ ಪರಶುರಾಮ ಜಯಂತಿಯನ್ನು ದೇಶಾದ್ಯಂತ ಆಚರಿಸಲಾಗುತ್ತಿದೆ.

<><><>

ಅಕ್ಷಯ ತೃತೀಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಪ್ರಧಾನಿ, ಈ ಹಬ್ಬವು ಸದ್ಗುಣ ಕಾರ್ಯಗಳು, ದಾನ ಮತ್ತು ಸೇವೆಯ ಹಾದಿಯಲ್ಲಿ ಸಾಗಲು ಪ್ರೇರಣೆ ನೀಡುತ್ತದೆ. ಈ ಹಬ್ಬವು ಪ್ರತಿಯೊಬ್ಬರ ಜೀವನಕ್ಕೂ ಸಂತೋಷ, ಸಮೃದ್ಧಿ ಮತ್ತು ಉತ್ತಮ ಆರೋಗ್ಯವನ್ನು ತರಲಿ ಎಂದು ಅವರು ಹಾರೈಸಿದ್ದಾರೆ. ಇದೇ ವೇಳೆ ಪ್ರಧಾನಿ, ಜನತೆಗೆ ಪರಶುರಾಮ ಜಯಂತಿಗೂ ಶುಭಾಶಯ ಕೋರಿದ್ದಾರೆ. ಪರಶುರಾಮನು ನಾಗರಿಕರು ಅನ್ಯಾಯದ ವಿರುದ್ಧ ದೃಢವಾಗಿ ನಿಲ್ಲಲು ಮತ್ತು ಸತ್ಯದ ಹಾದಿಯಲ್ಲಿ ದೃಢವಾಗಿರಲು ಪ್ರೇರೇಪಿಸುತ್ತಾನೆ ಎಂದು ಹೇಳಿದ್ದಾರೆ. ಅಪ್ರತಿಮ ಶೌರ್ಯ ಮತ್ತು ಬುದ್ಧಿವಂತಿಕೆಯ ಸಂಕೇತವಾಗಿರುವ ಭಗವಾನ್ ಪರಶುರಾಮನ ಕೃಪೆಯು, ಪ್ರತಿಯೊಬ್ಬರಲ್ಲಿಯೂ ನವೀಕೃತ ಶಕ್ತಿ ಮತ್ತು ಹೊಸ ಆತ್ಮವಿಶ್ವಾಸವನ್ನು ತುಂಬಲಿ ಹಾಗೂ

ಭಗವಾನ್ ಪರಶುರಾಮನ ಆಶೀರ್ವಾದ ಪ್ರತಿಯೊಬ್ಬರ ಜೀವನದಲ್ಲಿ ಸಂತೋಷ, ಶಾಂತಿ ಮತ್ತು ಸಮೃದ್ಧಿ ತರಲಿ ಎಂದು ಅವರು ಆಶಿಸಿದ್ದಾರೆ.

<><><><>

ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯಲ್ಲಿರುವ ಶ್ರೀ ಗಂಗೋತ್ರಿ ಮತ್ತು ಯಮುನೋತ್ರಿ ದೇವಾಲಯಗಳ ದ್ವಾರಗಳು ಇಂದು ಅಕ್ಷಯ ತೃತೀಯದ ಶುಭ ಸಂದರ್ಭದಲ್ಲಿ ಭಕ್ತರಿಗಾಗಿ ತೆರೆಯಲ್ಪಟ್ಟಿವೆ. ಇದರೊಂದಿಗೆ, ರಾಜ್ಯದಲ್ಲಿ ಚಾರ್ ಧಾಮ್ ಯಾತ್ರೆ ಔಪಚಾರಿಕವಾಗಿ ಪ್ರಾರಂಭವಾಗಿದೆ. ಗಂಗೋತ್ರಿ ದೇಗುಲದಲ್ಲಿ ದ್ವಾರಗಳನ್ನು ತೆರೆಯುವ ಸಂದರ್ಭದಲ್ಲಿ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಉಪಸ್ಥಿತರಿದ್ದರು. ಕೇದಾರನಾಥ ದೇಗುಲದ ದ್ವಾರಗಳು ಇದೇ ೧೧ ರಂದು ಮತ್ತು ಬದರಿನಾಥ ದೇಗುಲದ ದ್ವಾರಗಳು ಇದೇ ೧೨ ರಂದು ತೆರೆಯಲಿದೆ.

<><><><>

ಡರ್ಬನ್‌ನ ಕಿಂಗ್ಸ್‌ಮೀಡ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐದು ಪಂದ್ಯಗಳ ಅಂತಾರಾಷ್ಟ್ರೀಯ ಮಹಿಳಾ ಟಿ-೨೦ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಆತಿಥೇಯ ದಕ್ಷಿಣ ಆಫ್ರಿಕಾ ತಂಡವನ್ನು ಭಾರತ ವನಿತೆಯರ ತಂಡ ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೫:೩೦ ಕ್ಕೆ ಪ್ರಾರಂಭವಾಗಲಿದೆ.

<><><><>

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ಆಯೋಜನೆಗೊಂಡಿದ್ದು, ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನ್ನಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಚಂಡೀಗಢದ ಮುಲ್ಲಾಂಪುರ್‌ನ ಮಹಾರಾಜ ಯದವಿಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ರಾತ್ರಿ ೭.೩೦ ಕ್ಕೆ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ಲಖ್ನೋ ಸೂಪರ್ ಜೈಂಟ್ಸ್ ತಂಡಗಳು ಸೆಣಸಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>